# 2 ನೇ ಹೆಚ್ಚುವರಿ ಪ್ರಥಮ ದರ್ಜೆಯ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ, ನಂಜನಗೂಡು.

**ಓ ಎಸ್ ನಂ.411-2016** **ಪಿ . ಡಬ್ಲುಃ 4**

| | |
|---|---|
| ಸಾಕ್ಷಿದಾರರ ಹೆಸರು | ಕಾಳಿಂಗ |
| ತಂದೆಯ/ಗಂಡನ ಹೆಸರು | ಬಸವಯ್ಯ |
| ವಯಸ್ಸು | 45 ವರ್ಷ |
| ಉದ್ಯೋಗ | ವ್ಯವಸಾಯ |
| ವಾಸ್ತವ್ಯ | ಸಿಂಧುವಳ್ಳಿ ಗ್ರಾಮ, ನಂಜನಗೂಡು ತಾ. |
| | **ಸತ್ಯ ಪ್ರತಿಜ್ಞೆಯ ಮೇರೆಗೆ ದಿನಾಂಕ 25-07-2024.** |

**ಮುಖ್ಯ ವಿಚಾರಣೆಃ ವಾದಿ ಪರ ವಕೀಲರಾದ ಶ್ರೀ ಎಂ.ಬಿ ರವರಿಂದಃ-**

ನಾನು ನನ್ನ ಮುಖ್ಯ ವಿಚಾರಣೆಯನ್ನು ಪ್ರಮಾಣ ಪತ್ರದ ಮೂಲಕ ಸಲ್ಲಿಸಿದ್ದು ಅದರಲ್ಲಿ ಬರೆದಿರುವ ಎಲ್ಲಾ ವಿಷಯಗಳು ಸತ್ಯವಾಗಿದ್ದು ಅದನ್ನು ನಾನೇ ಹೇಳಿ ಬರೆಯಿಸಿ ಸಹಿ ಮಾಡಿರುತ್ತೇನೆ.

**ಪಾಟೀ ಸವಾಲು ಪ್ರತಿವಾದಿ ಪರ ಶ್ರೀ ಕೆ.ಎಸ್.ಕೆ ವಕೀಲರಿಂದ**

ನನಗೆ ವಾದಿ ಮತ್ತು ಪ್ರತಿವಾದಿಯ ಗಂಡನ ಹೆಸರು ಗೊತ್ತಿಲ್ಲ. ನನಗೆ ದಾವಾ ಸ್ವತ್ತಿನ ಸರ್ವೆ ನಂಬರ್ ಗೊತ್ತಿಲ್ಲ. ವಾದಿ ಮತ್ತು ಪ್ರತಿವಾದಿಯವರಿಗೆ ಏನು ಸಂಬಂಧ ಎಂದು ನನಗೆ ಗೊತ್ತಿಲ್ಲ. ದಾವಾ ಷೆಡ್ಯೂಲ್ ಸ್ವತ್ತಿಗೆ ಸಂಬಂಧಿಸಿದಂತೆ ದಾಖಲಾತಿಗಳನ್ನು ನಾನು ನೋಡಿರುವುದಿಲ್ಲ. ದಾವಾ ಷೆಡ್ಯೂಲ್ ಸ್ವತ್ತಿನ ಪಕ್ಕದಲ್ಲಿ ನನಗೆ ಸೇರಿದ ಜಮೀನು ಇದ್ದು, ಅದರ ಸರ್ವೆ ನಂ.480/2 ಆಗಿರುತ್ತದೆ. ಪ್ರತಿವಾದಿ ನಾಗಮ್ಮ ನವರ ಸ್ವತ್ತಿನ ಆಸು-ಪಾಸಿನಲ್ಲಿ ನಾವು ಇರುತ್ತೇವೆ. ವಾದಿ ಸಾಕ್ಷಿ ಹೇಳುವಂತೆ ನನ್ನನ್ನು ನ್ಯಾಯಾಲಯಕ್ಕೆ ಕರೆದುಕೊಂಡು ಬಂದಿದ್ದರಿಂದ ನಾನು ಸಾಕ್ಷಿ ಹೇಳಲು ನ್ಯಾಯಾಲಯಕ್ಕೆ ಬಂದಿರುತ್ತೇನೆ ಎಂದರೆ ಸರಿ. ವಾದಿಗೆ ದಾವಾ ಷೆಡ್ಯೂಲ್ ಸ್ವತ್ತು

ಕ್ರಯ ಪತ್ರದ ಮುಖೇನ ಬಂತು  ಎಂಬ ವಿಚಾರವನ್ನು ನನ್ನ ಮುಖ್ಯ ವಿಚಾರಣೆಯಲ್ಲಿ ನಾನೇ ಹೇಳಿ ಬರೆಸಿರುತ್ತೇನೆ. ಕ್ರಯ ಪತ್ರದ ಬಗ್ಗೆ ಮಾತನಾಡುತ್ತಿದ್ದುದ್ದನ್ನು ನಾನು ಕೇಳಿರುತ್ತೇನೆ. ಆದರೆ ನಾನು ಕ್ರಯ ಪತ್ರವನ್ನು ಕಣ್ಣಾರೆ ನೋಡಿರುವುದಿಲ್ಲ. ನನಗೆ ಯಾವುದೇ ವಿಚಾರ ಗೊತ್ತಿಲ್ಲದೇ ಇದ್ದರೂ ವಾದಿ ನನ್ನ ಜಮೀನಿನ ಆಸು–ಪಾಸಿನಲ್ಲಿ ವ್ಯವಸಾಯ ಮಾಡದೇ ಇದ್ದರೂ ಸಹ ಅವರಿಗೆ ಸಹಾಯ ಮಾಡುವ ಉದ್ದೇಶದಿಂದ  ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರು ವಿಚಾರಣೆ ಇಲ್ಲ.**

**(ತೆರೆದ ನ್ಯಾಯಾಲಯದಲ್ಲಿ ನನ್ನ ಹೇಳಿಕೆಯಂತೆ ಗಣಕೀಕೃತ ಮಾಡಿಸಲಾಯಿತು)**

**ಓ . ಹೇ. ಕೇ. ಸರಿ. ಇದೆ**

**ಸಹಿ/–**

**2 ನೇ ಪ್ರ.ದ. ನ್ಯಾ ದಂ. ನಂಜನಗೂಡು**